# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002

***ಪತ್ರಿಕಾ ಪ್ರಕಟಣೆ*** **ದಿನಾಂಕ: 18.10.2011**

ಮೆಟ್ರೋ ರೈಲು ಸಂಚಾರ ಆರಂಭ ಹಿನ್ನೆಲೆಯಲ್ಲಿ ನಗರದಲ್ಲಿ ಕೈಗೆತ್ತಿಕೊಳ್ಳಲಾಗಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉಸ್ತುವಾರಿಯನ್ನು ವಹಿಸಿಕೊಂಡಿರುವ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಆಯುಕ್ತರಾದ ಶ್ರೀ ಸಿದ್ದಯ್ಯ ರವರು ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ, ಪ್ರಗತಿ ಪರಿಶೀಲನೆ ನಡೆಸಿದರು.

ಬಸವೇಶ್ವರ ವೃತ್ತ, ರಾಜಭವನ ರಸ್ತೆ, ಸ್ಯಾಂಕಿ ರಸ್ತೆ, ಕಬ್ಬನ್ ರಸ್ತೆ, ಓಲ್ಡ್ ಏರ್‌ಪೋರ್ಟ್ ರಸ್ತೆ, ಹಲಸೂರು ರಸ್ತೆ, ಟ್ರಿನಿಟಿ ಜಂಕ್ಷನ್‌ಗಳಲ್ಲಿ ಹೂಗಿಡಗಳನ್ನು ಮತ್ತು Ornamental ಸಸಿಗಳನ್ನು ನೆಟ್ಟಿ, ಜಂಕ್ಷನ್‌ಗಳನ್ನು ಸುಂದರಗೊಳಿಸಿರುವ ಸ್ಥಳಗಳಿಗೆ ಭೇಟಿ ನೀಡಿ, ಪರಿವೀಕ್ಷಿಸಿ, ಸಲಹೆಗಳನ್ನು ನೀಡಿದರು.

ಎಂ.ಜಿ. ರಸ್ತೆ, ಟ್ರಿನಿಟಿ ವೃತ್ತ, ಬ್ರಿಗೇಡ್ ರಸ್ತೆ, ಅನಿಲ್ ಕುಂಬ್ಳೆ ವೃತ್ತ, ಬಸವೇಶ್ವರ ವೃತ್ತಗಳಲ್ಲಿನ ಜಂಕ್ಷನ್‌ಗಳಲ್ಲಿ ರಸ್ತೆ ಡಾಂಬರೀಕರಣ ಕಾಮಗಾರಿಯು ಬಹುತೇಕ ಪೂರ್ಣಗೊಳಿಸಲಾಗಿದ್ದು, ಇಂದು ರಾತ್ರಿಯೊಳಗೆ ಉಳಿಕೆ ಕಾಮಗಾರಿಯನ್ನು ಪೂರ್ಣಗೊಳಿಸುವಂತೆ ಸ್ಥಳದಲ್ಲಿದ್ದ ಮುಖ್ಯ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ) ರವರಿಗೆ ಸೂಚಿಸಿದರು. ಕಬ್ಬನ್ ರಸ್ತೆ, ರಾಜಭವನ ರಸ್ತೆ, ಓಲ್ಡ್ ಏರ್‌ಪೋರ್ಟ್ ರಸ್ತೆಗಳಲ್ಲಿ ಸ್ಥಳಾವಕಾಶ ಇರುವ ಕಡೆ ಹೂಗಿಡಗಳನ್ನು ಹಾಗೂ Ornamental ಸಸಿಗಳನ್ನು ನೆಡುವ ಮತ್ತು ಪಾದಚಾರಿ ಮಾರ್ಗಗಳ ದುರಸ್ಥಿಪಡಿಸುವ ಕಾರ್ಯ ಪ್ರಗತಿಯಲ್ಲಿದೆ. ನಾಳೆ ಸಾಯಂಕಾಲದ ಒಳಗಾಗಿ ಈ ಕಾರ್ಯಗಳನ್ನೆಲ್ಲಾ ಪೂರ್ಣಗೊಳಿಸಲಾಗುವುದೆಂದು ತಿಳಿಸಿದರು.

ಮಹಾತ್ಮಗಾಂಧಿ ವೃತ್ತದಿಂದ ಕಬ್ಬನ್ ಪಾರ್ಕ್ ರಸ್ತೆಗೆ ಹೊಂದಿಕೊಂಡಂತೆ ಇರುವ ಕ್ವೀನ್ಸ್ ರಸ್ತೆಯಲ್ಲಿ ಪಾದಚಾರಿ ಮಾರ್ಗವನ್ನು ಅಭಿವೃದ್ಧಿಪಡಿಸಿ ಸುಂದರಗೊಳಿಸಲಾಗಿದೆ. ಎಲ್ಲಾ ಪ್ರಮುಖ ರಸ್ತೆಗಳ ಬದಿಯಲ್ಲಿರುವ ತ್ಯಾಜ್ಯ ಮತ್ತು ಕಟ್ಟಡದ ಭಗ್ನಾವಶೇಷ ಹಾಗೂ ಮಣ್ಣಿನ ರಾಶಿಗಳನ್ನು ತೆರವುಗೊಳಿಸಲಾಗಿದ್ದು, ಅವಶ್ಯವಿರುವ ಜಾಗದಲ್ಲಿ ಸಸಿಗಳನ್ನು ನೆಟ್ಟು, ಸುಂದರೀಕರಣಗೊಳಿಸುವ ಕಾಮಗಾರಿ ಪ್ರಗತಿಯಲ್ಲಿದೆ.

ಹಿಂದಿನ ಮಿನ್ಸ್ ಚೌಕದಲ್ಲಿ ಮೆಟ್ರೋ ಕಾಮಗಾರಿ ಪ್ರಗತಿಯಲ್ಲಿದ್ದು, ಉಳಿದ ಭಾಗದಲ್ಲಿ ಅನಧಿಕೃತವಾಗಿ ಸುರಿಯಲಾಗಿದ್ದ ಕಟ್ಟಡದ ಭಗ್ನಾವಶೇಷದ ರಾಶಿಗಳನ್ನು ತೆರವುಗೊಳಿಸಲಾಗುತ್ತಿದ್ದು, ತದನಂತರ ಅಲಂಕಾರಿಕ ಗಿಡಗಳನ್ನು ನೆಟ್ಟು, ಸುಂದರೀಕರಣಗೊಳಿಸುವ ಕಾಮಗಾರಿಯು ಪ್ರಗತಿಯಲ್ಲಿದ್ದು, ನಾಳೆಯ ಒಳಗಾಗಿ ಪೂರ್ಣಗೊಳ್ಳಲಿದೆ.

ಮಾಣಿಕ್‌ಷಾ ಪೆರೇಡ್ ಮೈದಾನವನ್ನು ಸಮತಟ್ಟುಗೊಳಿಸಿ ಸಿದ್ಧಗೊಳಿಸಲಾಗಿದ್ದು, ಡೆಬ್ರೀಸ್ ಹಾಗೂ ತ್ಯಾಜ್ಯವಸ್ತುಗಳನ್ನು ಹೊರ ಸಾಗಿಸಲಾಗಿದ್ದು, ಬಿ.ಎಂ.ಆರ್.ಸಿ.ಎಲ್. ವತಿಯಿಂದ ವೇದಿಕೆ ಹಾಗೂ ಸಭಾಂಗಣ ನಿರ್ಮಿಸಲು ಹಸ್ತಾಂತರಿಸಲಾಗಿದೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**